**All India Radio: Bangalore**
**Regional Bulletin In Kannada**
**16.01.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ಜಾತಿ ಗಣತಿ ವರದಿ; ಊಹಾ-ಪೋಹ ಆಧರಿಸಿ ವಿರೋಧಿಸುವುದು ತರವಲ್ಲ - ಮುಖ್ಯಮಂತ್ರಿ ಸಿದ್ದರಾಮಯ್ಯ
2. ಕಿಯೋನಿಕ್ಸ್ ಗುತ್ತಿಗೆದಾರರನ್ನು ಭೇಟಿ ಮಾಡಿ ಧೈರ್ಯ ತುಂಬಿದ ಕೇಂದ್ರ ಸಚಿವ ಕುಮಾರಸ್ವಾಮಿ
3. ಬೆಂಗಳೂರಿನಲ್ಲಿ ೩೯೦ ಕೋಟಿ ರೂಪಾಯಿ ಹೂಡಿಕೆಯ ಐಬಿಸಿ ಗಿಗಾ ಬ್ಯಾಟರಿ ಘಟಕಕ್ಕೆ ಸಚಿವ ಎಂ.ಬಿ. ಪಾಟೀಲ್ ಶಂಕುಸ್ಥಾಪನೆ
4. ಲಾಲ್‌ಬಾಗ್‌ನಲ್ಲಿ ಆದಿಕವಿ ವಾಲ್ಮೀಕಿ ವಿಷಯಧಾರಿತ ಫಲಪುಷ್ಪ ಪ್ರದರ್ಶನಕ್ಕೆ ನಾಳೆ ಚಾಲನೆ

<><><><>

ಜಾತಿ ಗಣತಿ ವರದಿಯಲ್ಲಿರುವ ಅಂಕಿ-ಅಂಶಗಳ ಬಗ್ಗೆ ಊಹಾ-ಪೋಹಗಳನ್ನು ಆಧರಿಸಿ ವಿರೋಧಿಸುವುದು ಸರಿಯಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ನವದೆಹಲಿಯಲ್ಲಿ ಮಾತನಾಡಿದ ಅವರು ನಾಳಿನ ಸಂಪುಟ ಸಭೆಯಲ್ಲಿ ಜಾತಿಗಣತಿ ವರದಿ ಮಂಡಿಸುವುದಿಲ್ಲ. ಮುಂಬರುವ ಸಂಪುಟಸಭೆಯಲ್ಲಿ ವಿಷಯ ಮಂಡಿಸಿ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ ಕೆಪಿಸಿಸಿ ಅಧ್ಯಕ್ಷ ಬದಲಾವಣೆ ಕುರಿತು ಪ್ರತಿಕ್ರಿಯಿಸಿದ ಅವರು, ವರಿಷ್ಠರ ತೀರ್ಮಾನವೇ ಅಂತಿಮ ಎಂದರು. ಬಿಲ್ಲುಗಳು ಪಾವತಿಯಾಗದಿರುವ ಬಗ್ಗೆ ರಾಜ್ಯಪಾಲರಿಗೆ ದೂರು ನೀಡಿರುವ ಬಗ್ಗೆ ಕಿಯೋನಿಕ್ಸ್ ಅಸೋಸಿಯೇಷನ್ ಪ್ರತಿಕ್ರಿಯೆ ನೀಡಿ, ಹಿಂದಿನ ಬಿಜೆಪಿ ಸರ್ಕಾರ ದೊಡ್ಡ ಮೊತ್ತದ ಬಿಲ್ಲುಗಳನ್ನು ಪಾವತಿ ಮಾಡದೇ ಬಾಕಿ ಉಳಿಸಿತು. ಈ ಬಿಲ್ಲುಗಳನ್ನು ಹಂತ ಹಂತವಾಗಿ ಪಾವತಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು.

<><><><>

ಜಾತಿಗಣತಿ ವರದಿಯ ಮಾಹಿತಿಯನ್ನು ಸಾರ್ವಜನಿಕರಿಗೆ ತಿಳಿಸುವುದು ಸರ್ಕಾರದ ಕೆಲಸ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು ಸರ್ಕಾರ ೧೬೦ ಕೋಟಿ ರೂಪಾಯಿ ಖರ್ಚು ಮಾಡಿದ್ದು ವರದಿಯಲ್ಲಿರುವ ಅಂಶಗಳು ಸಾರ್ವಜನಿಕರಿಗೆ ತಿಳಿಯಬೇಕು ಎಂದು ಹೇಳಿದ್ದಾರೆ.

<><><><>

ಸರ್ಕಾರ ಕೂಡಲೇ ಕಿಯೋನಿಕ್ಸ್ ಗುತ್ತಿಗೆ ನೌಕರರ ಬಿಲ್ ಪಾವತಿಸುವಂತೆ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಆಗ್ರಹಿಸಿದ್ದಾರೆ. ಬೆಂಗಳೂರಿನಲ್ಲಿ ಗುತ್ತಿಗೆ ನೌಕರರನ್ನು ಭೇಟಿ ಮಾಡಿ ಸಚಿವರು ಧೈರ್ಯ ತುಂಬಿದ್ದಾರೆ. ಗುತ್ತಿಗೆ ನೌಕರರು ಯಾವುದೇ ಒಂದು ಕಾಮಗಾರಿ ಮಾಡುವುದಿಲ್ಲ ಎಂದು ನಿರ್ಧಾರ ತೆಗೆದುಕೊಂಡು ಒಗ್ಗಟ್ಟಾಗಿ ಎಂದು ಸಲಹೆ ನೀಡಿದ್ದಾರೆ. ಬಾಕಿ ಬಿಲ್ ಪಾವತಿಸದೇ ಇದ್ದರೆ, ಆತ್ಮಹತ್ಯೆ ಮಾಡಿಕೊಳ್ಳುವುದಾಗಿ ಗುತ್ತಿಗೆ ನೌಕರರು ಪತ್ರ ಬರೆದಿದ್ದು, ಈ ಬಗ್ಗೆ ಸಚಿವ ಪ್ರಿಯಾಂಕ್ ಖರ್ಗೆ ನಿರ್ಲಕ್ಷ್ಯ ತೋರಿದ್ದಾರೆ ಎಂದು ಕುಮಾರಸ್ವಾಮಿ ಬೇಸರ ವ್ಯಕ್ತಪಡಿಸಿದರು.

<><><><>

ಲೀಥಿಯಂ-ಅಯಾನ್ ಬ್ಯಾಟರಿ ತಯಾರಿಸುವ ಅಂತಾರಾಷ್ಟ್ರೀಯ ಬ್ಯಾಟರಿ ಕಂಪನಿಯ - ಗಿಗಾ ಸ್ಥಳೀಯ ಘಟಕಕ್ಕೆ ಬೆಂಗಳೂರಿನಲ್ಲಿ ಇಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ ಪಾಟೀಲ್ ಶಂಕುಸ್ಥಾಪನೆ ನೆರವೇರಿಸಿದರು. ಇದೇ ವೇಳೆ ಮಾತನಾಡಿದ ಅವರು, 'ದೇವನಹಳ್ಳಿಯ ಕೆಐಎಡಿಬಿ ಐಟಿಐಆರ್ ಕೈಗಾರಿಕಾ ಪ್ರದೇಶದಲ್ಲಿ ಅಸ್ತಿತ್ವಕ್ಕೆ ಬರಲಿರುವ ಈ ಉತ್ಪಾದನಾ ಘಟಕಕ್ಕೆ ಕಂಪನಿಯು ಮೊದಲ ಹಂತದಲ್ಲಿ ೩೯೦ ಕೋಟಿ ರೂಪಾಯಿ ಹೂಡಿಕೆ ಮಾಡಲಿದ್ದು, ೩೦೦ ನೇರ ಉದ್ಯೋಗ ಸೃಷ್ಟಿಯಾಗಲಿದೆ. ಇಲ್ಲಿ ಉತ್ಪಾದಿಸಲಾಗುವ

ಬ್ಯಾಟರಿಗಳ ಪೈಕಿ ಶೇಕಡ ೨೦ರಷ್ಟನ್ನು ಅಮೆರಿಕ ಮತ್ತು ಯೂರೋಪ್ ದೇಶಗಳಿಗೆ ರಫ್ತು ಮಾಡಲಾಗುವುದು' ಎಂದು ಹೇಳಿದರು. ಐಬಿಸಿ ಕಂಪನಿಯು ಸದ್ಯಕ್ಕೆ ದಕ್ಷಿಣ ಕೊರಿಯಾದಲ್ಲಿ ಸೆಲ್ಸ್ ಉತ್ಪಾದಿಸಿ, ಅವುಗಳನ್ನು ಇಲ್ಲಿಗೆ ತಂದು ಪೂರ್ಣ ಪ್ರಮಾಣದ ಬ್ಯಾಟರಿಗಳನ್ನು ತಯಾರಿಸುತ್ತಿದೆ. ನೂತನ ಘಟಕ ಕಾರ್ಯಾರಂಭವಾದ ನಂತರ ಇಲ್ಲೇ ಸೆಲ್ ಗಳ ಉತ್ಪಾದನೆ ಆಗಲಿದೆ. ಇದು ದೇಶದಲ್ಲೇ ಮೊದಲ ಸೆಲ್ ಉತ್ಪಾದನಾ ಘಟಕವಾಗಲಿದೆ. ಮುಂಬರುವ ದಿನಗಳಲ್ಲಿ ದ್ವಿಚಕ್ರ, ತ್ರಿಚಕ್ರ ವಾಹನಗಳ ಜತೆಗೆ ಉಳಿದ ವಾಹನಗಳಿಗೂ ಇದು ಬ್ಯಾಟರಿ ಪೂರೈಸಲಿದೆ ಎಂದು ಸಚಿವರು ತಿಳಿಸಿದರು.

<><><><>

ಹುಬ್ಬಳ್ಳಿಯ ವರೂರಿನಲ್ಲಿ ಜೈನ ತೀರ್ಥಂಕರರ ಮಹಾಮಸ್ತಕಾಭಿಷೇಕ ಆಯೋಜಿಸಲಾಗಿದ್ದು, ರಾಜ್ಯಪಾಲ ಥಾವರ್ ಚಂದ್ ಗೆಲ್ಹೋಟ್ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ವಿಶ್ವದ ಅತಿ ಎತ್ತರದ ೪೦೫ ಅಡಿಯ ಸುಮೇರು ಪರ್ವತ ಜಿನಬಿಂಬ ಹಾಗೂ ೬೧ ಅಡಿ ಎತ್ತರದ ಭಗವಾನ್ ಪಾರ್ಶ್ವನಾಥ ಮೂರ್ತಿಗೆ ಮಹಾಮಸ್ತಕಾಭಿಷೇಕ ನೇರವೇರಲಿದೆ. ಇಂದಿನಿಂದ ೧೧ ದಿನಗಳ ಕಾಲ ಕಾರ್ಯಕ್ರಮ ನಡೆಯಲಿದೆ. ಕಾರ್ಯಕ್ರಮದಲ್ಲಿ ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗೆ, ವರೂರ ನವಗ್ರಹ ತೀರ್ಥ ಕ್ಷೇತ್ರದ ಗುಣಧರ ನಂದಿ ಸ್ವಾಮೀಜಿ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ.

<><><><>

ಗಣರಾಜ್ಯೋತ್ಸವ ಹಿನ್ನೆಲೆಯಲ್ಲಿ ಬೆಂಗಳೂರು ಲಾಲ್‌ಬಾಗ್‌ನಲ್ಲಿ ೨೧೬ನೇ ಫಲಪುಷ್ಪ ಪ್ರದರ್ಶನ ಪ್ರತಿ ವರ್ಷದಂತೆ ಈ ಬಾರಿಯು ಆಯೋಜಿಸಲಾಗಿದೆ. ನಾಳೆಯಿಂದ ಇದೇ ೨೬ರವರೆಗೆ ೧೨ ದಿನಗಳ ಕಾಲ ಪುಷ್ಪ ಪ್ರದರ್ಶನ ನಡೆಯಲಿದೆ. ಮಹಾಕಾವ್ಯ ರಾಮಾಯಾಣದ ಕರ್ತೃ ಮಹರ್ಷಿ ವಾಲ್ಮೀಕಿ ಗೌರವಾರ್ಥ ಪುಷ್ಪ ಅಲಂಕಾರ ವಿನ್ಯಾಸ ಸಿದ್ಧಗೊಂಡಿದೆ. ಪ್ರಮುಖ ಆಕರ್ಷಣೆಯಾದ ಗಾಜಿನ ಮನೆಯಲ್ಲಿ ವಾಲ್ಮಿಕಿ ಜೀವನದ ದೃಶ್ಯ ರೂಪುಗೊಂಡಿದೆ. ವಾಲ್ಮೀಕಿಯ ಬಾಲ್ಯದಿಂದ ಹಿಡಿದು ಋಷಿಯಾಗಿ ಮತ್ತು ರಾಮಾಯಣದ ಕರ್ತೃವಾಗಿ ಸಾಗಿಬಂದ ಜೀವನ ಗಾಥೆಯನ್ನು ಅದ್ಭುತವಾಗಿ ಹೂವಿನ ಮೂಲಕ ಬಿಂಬಿಸಲಾಗಿದೆ. ಸುಮಾರು ೨೫ ಲಕ್ಷ ಹೂವುಗಳಿಂದ ವಾಲ್ಮೀಕಿ ಆಶ್ರಮವನ್ನು ರಚಿಸಿರುವುದು ಪ್ರದರ್ಶನದ ಮುಖ್ಯ ಆಕರ್ಷಣೆಯಾಗಿದೆ. ಕೇಂದ್ರ ಭಾಗದಲ್ಲಿ ವಿವಿಧ ಬಗೆಯ ೧೦ ಲಕ್ಷ ಹೂಗಳನ್ನು ಬಳಸಿಕೊಳ್ಳಲಾಗಿದೆ. ಈ ಕುರಿತಂತೆ ಆಕಾಶವಾಣಿಗೆ ತೋಟಗಾರಿಕೆ ಇಲಾಖೆ ಉಪನಿರ್ದೇಶಕರಾದ ಬಿ.ಟಿ.ಬಾಲಕೃಷ್ಣ ಮಾಹಿತಿ ನೀಡಿದ್ದಾರೆ.

<><><><>

ಅರಣ್ಯ ಭೂಮಿ ಒತ್ತುವರಿ ಆರೋಪ ಹಿನ್ನಲೆ ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲ್ಲೂಕಿನ ಜಿನಗಲಕುಂಟೆ ಅರಣ್ಯ ಭೂಮಿಯ ಜಂಟಿ ಸರ್ವೆ ನಡೆಸಲಾಗಿದೆ ಎಂದು ಕೋಲಾರ ಜಿಲ್ಲಾಧಿಕಾರಿ ಎಂ.ಅರ್.ರವಿ ಸ್ಪಷ್ಟಪಡಿಸಿದ್ದಾರೆ. ನ್ಯಾಯಾಲಯದ ಸೂಚನೆ ಮೇರೆಗೆ ಜಂಟಿ ಸರ್ವೇ ಕಾರ್ಯ ಕೈಗೆತ್ತಿಕೊಳ್ಳಲಾಗಿದೆ ಎಂದು ಹೇಳಿದ್ದಾರೆ.

ಸರ್ವೇಗೆ ಸಹಕಾರ ನೀಡುವುದಾಗಿ ಮಾಜಿ ಸ್ಪೀಕರ್ ರಮೇಶ್ ಕುಮಾರ್ ತಿಳಿಸಿದ್ದಾರೆ. ಸರ್ವೆ ಮಾಡಬೇಕೆಂದು ೨೦೦೨ ಮತ್ತು ೨೦೦೯ ರಲ್ಲಿ ತಾವೇ ಅರ್ಜಿ ಸಲ್ಲಿಸಿರುವುದಾಗಿ ಹೇಳಿದ್ದಾರೆ.

<><><><>

ಚಿಕ್ಕಮಗಳೂರು ಜಿಲ್ಲೆಯಲ್ಲಿ ಮಂಗನಕಾಯಿಲೆ ಪ್ರಕರಣವೊಂದು ಪತ್ತೆಯಾಗಿದೆ. ಖಾಂಡ್ಯ ಹೋಬಳಿಯ ಮತ್ತಿಖಂಡ ಗ್ರಾಮದ ೨೫ ವರ್ಷದ ಯುವಕನಲ್ಲಿ ಸೋಂಕು ಕಾಣಿಸಿಕೊಂಡಿದ್ದು ಚಿಕಿತ್ಸೆಗಾಗಿ ಕೊಪ್ಪ ಆಸ್ಪತ್ರೆಗೆ ದಾಖಲಿಸಲಾಗಿದೆ. ಈ ಬಗ್ಗೆ ಆರೋಗ್ಯ ಇಲಾಖೆ ಅಧಿಕಾರಿಗಳು ನಿಗಾ ವಹಿಸಿದ್ದು ಜಿಲ್ಲೆಯ ಕೊಪ್ಪ, ಶೃಂಗೇರಿ,ಎನ್ ಪುರ ತಾಲೂಕುಗಳ ಅರಣ್ಯದಂಚಿನ ಗ್ರಾಮಗಗಳಲ್ಲಿ ಕೆ ಎಫ್ ಡಿ ಕುರಿತು ಜನರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಆರೋಗ್ಯ ಇಲಾಖೆ ಸಿಬ್ಬಂದಿ ಮನೆ ಮನೆಗೆ ತೆರಳಿ ಜಾಗೃತಿ ಮೂಡಿಸುವ ಜೊತೆಗೆ ಕೆಲವೆಡೆ ಹೆಚ್ಚು ಜ್ವರ

ಇರುವವರ ರಕ್ತದ ಮಾದರಿ ಸಂಗ್ರಹಿಸಿ ಪರೀಕ್ಷೆ ನಡೆಸುತ್ತಿದ್ದಾರೆ. ಕಳೆದ ವರ್ಷ ಜಿಲ್ಲೆಯ ಕೊಪ್ಪ ಶೃಂಗೇರಿ ಭಾಗದಲ್ಲಿ ೧೩೦ ಕ್ಕು ಹೆಚ್ಚು ಕೆ.ಎಫ್.ಡಿ ಸೋಂಕು ಪತ್ತೆಯಾಗಿದ್ದು ನಾಲ್ವರು ಮೃತಪಟಿದ್ದರು.

<><><><>

ವಿವಿಧ ಕಾರಣಗಳಿಂದ ಶಿಕ್ಷಣವನ್ನು ಅರ್ಧಕ್ಕೆ ಮೊಟಕುಗೊಳಿಸಿ ಮನೆಯಲ್ಲಿರುವ ಯುವಕ ಯುವತಿಯರಿಗೆ ಪ್ರತಿಷ್ಠಿತ ಕಂಪನಿಗಳಲ್ಲಿ ಉದ್ಯೋಗ ಕೊಡಿಸುವ ಉದ್ದೇಶದಿಂದ ಹಾವೇರಿ ವಿಶ್ವವಿದ್ಯಾಲಯ ಹೊಸದೊಂದು 'ಸಿದ್ಧಿ-ಇ' ತರಬೇತಿ ಆರಂಭಿಸಿದೆ. ಬೆಂಗಳೂರಿನ ರಿಚ್-ಮಚ್-ಹೈಯರ್ ಸಂಸ್ಥೆ ಜೊತೆ ಒಪ್ಪಂದ ಮಾಡಿಕೊಂಡಿರುವ ಹಾವೇರಿ ವಿಶ್ವವಿದ್ಯಾಲಯ, ಮೊದಲ ಬ್ಯಾಚ್‌ನಲ್ಲಿ ೨೫ ಮಂದಿಗೆ ಮೂರು ತಿಂಗಳು ತರಬೇತಿ ನೀಡಲು ಮುಂದಾಗಿದೆ. ತರಬೇತಿ ಮೂಲಕ ಅಭ್ಯರ್ಥಿಗಳಿಗೆ ವಿವಿಧ ಕೆಲಸಗಳಿಗೆ ಪ್ರಯತ್ನಿಸಲಾಗುವುದು' ಎಂದು ಕುಲಪತಿ ಸುರೇಶ ಜಂಗಮಶೆಟ್ಟಿ ಮಾಹಿತಿ ನೀಡಿದ್ದಾರೆ.

<><><><>

ಸಂಕ್ಷಿಪ್ತ ಸುದ್ದಿಗಳು

1. ಭ್ರಷ್ಟಾಚಾರ, ಮುಖ್ಯಮಂತ್ರಿ ಬದಲಾವಣೆ, ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ವಿಷಯವನ್ನು ಮರೆ ಮಾಚಲು ಕಾಂಗ್ರೆಸ್ ಜಾತಿ ಗಣತಿ ಚರ್ಚೆ ಹುಟ್ಟು ಹಾಕಿದೆ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣ ಸ್ವಾಮಿ ಆರೋಪಿಸಿದ್ದಾರೆ.
2. ಬೆಳಗಾವಿ, ಬಾಗಲಕೋಟೆ, ವಿಜಾಪುರ, ಧಾರವಾಡದಲ್ಲಿ ಅಲ್ಪಸಂಖ್ಯಾತ ಸಮುದಾಯವರು ಹೆಚ್ಚಿನ ಸಂಖ್ಯೆಯಲ್ಲಿದ್ದು, ಸರ್ಕಾರದ ಯೋಜನೆಗಳ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ಯು. ನಿಸಾರ್ ಅಹಮ್ಮದ್ ಬೆಳಗಾವಿಯಲ್ಲಿ ತಿಳಿಸಿದ್ದಾರೆ.
3. ಬೆಂಗಳೂರಿನ ಚನ್ನಸಂದ್ರ ರೈಲು ನಿಲ್ದಾಣದಲ್ಲಿ ಕಾಮಗಾರಿ ನಡೆಯುತ್ತಿರುವ ಹಿನ್ನಲೆಯಲ್ಲಿ ಇಂದಿನಿಂದ ಫೆಬ್ರವರಿ ೨೮ರವರೆಗೆ ಕೆಲ ರೈಲುಗಳ ನಿಲುಗಡೆ ಇಲ್ಲ ಎಂದು ನೈಋತ್ಯ ರೈಲ್ವೆ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>